ಕರ್ನಾಟಕ ಸರ್ಕಾರ

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ

ಆನಂದರಾವ್ ವೃತ್ತ, ಬೆಂಗಳೂರು.-09

ಸಂಖ್ಯೆ: ಆಕುಕನಿ/ಆಪ್ರ/83/2020-21. ದಿನಾಂಕ : 05/06/2020

## ಸುತ್ತೋಲೆ

ವಿಷಯ : 2019-20 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ – ಪರೀಕ್ಷಾ ಕೇಂದ್ರಗಳಿಗೆ ಅರೆವೈದ್ಯಕೀಯ ಸಿಬ್ಬಂದಿ ನಿಯೋಜನೆ ಬಗ್ಗೆ.

ಉಲ್ಲೇಖ : ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಇವರ ಪತ್ರ ಸಂಖ್ಯೆ: ಎ8/ಪ.ಕೇಂ.ದ್ರಾ.ಸಿ/02/2020-21, ದಿನಾಂಕ:26/05/2020.

*****

2019-20 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಗಳನ್ನು ದಿನಾಂಕ: 25/06/2020 ರಿಂದ 04/07/2020 ರವರೆಗೆ ನಡೆಸಲು ತೀರ್ಮಾನಿಸಲಾಗಿದ್ದು, ಪರೀಕ್ಷೆ ಬರೆಯುವ ವಿದ್ಯಾರ್ಥಿಗಳ ಸುರಕ್ಷತಾ ಹಿತದೃಷ್ಟಿಯಿಂದ ಹಾಗೂ ಕೋವಿಡ್-19 ಹರಡುವುದನ್ನು ತಡೆಗಟ್ಟಲು ಲಾಕ್‌ಡೌನ್ ನಿಯಮಗಳ ಪ್ರಕಾರ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಅಗತ್ಯವಿರುವ ನರ್ಸ್/ಪ್ಯಾರಾ ಮೆಡಿಕಲ್ ಸಿಬ್ಬಂದಿಗಳನ್ನು ನಿಯೋಜಿಸಲು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಇದಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ಡಿ.ಡಿ.ಪಿ.ಐ. ಅವರಿಂದ ಜಿಲ್ಲೆಯಲ್ಲಿನ ಪರೀಕ್ಷಾ ಕೇಂದ್ರಗಳ ಮಾಹಿತಿಯನ್ನು ಪಡೆದು, ಅದರನ್ವಯ ಒಂದು ಕೇಂದ್ರಕ್ಕೆ ಇಬ್ಬರಂತೆ ಸಿಬ್ಬಂದಿಗಳನ್ನು (ಫಾರ್ಮಸಿಸ್ಟ್ / ಪ್ರಯೋಗಶಾಲಾ ತಂತ್ರಜ್ಞರು / ಕಿರಿಯ ಮಹಿಳಾ/ಪುರುಷ ಆರೋಗ್ಯ ಸಹಾಯಕರು / ಆಶಾ ಕಾರ್ಯಕರ್ತೆಯರು ಅಥವಾ ಯಾವುದೇ ಸೂಕ್ತ ಸಿಬ್ಬಂದಿ) ನಿಯೋಜಿಸಿ, ಪ್ರತಿ ದಿನ ಪರೀಕ್ಷೆಗೆ ಹಾಜರಾಗುವ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳಿಗೆ ಥರ್ಮಲ್ ಸ್ಕ್ಯಾನ್ ಪರೀಕ್ಷೆ ಮಾಡಲು ಸೂಚಿಸಿದೆ.

ನಿರ್ದೇಶಕರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಸೇವೆಗಳು, ಬೆಂಗಳೂರು.

ಗೆ:

ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.

ಪ್ರತಿ ಮಾಹಿತಿಗಾಗಿ :

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮಾನ್ಯ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ಮಾನ್ಯ ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.